ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 8/6/20

# ಎಸ್ ಮೂರ್ತಿ ತಕರಾರು ಅರ್ಜಿ ವಜಾ

ಬೆಂಗಳೂರು: ಅವ್ಯವಹಾರ ಆರೋಪಕ್ಕೆ ಸಂಬಂಧಪಟ್ಟಂತೆ ತಮ್ಮ ವಿರುದ್ಧದ ವಿಧಾನಸಭೆ ವಿಶೇಷ ಮಂಡಳಿಯ ವಿಚಾರಣೆ ರದ್ದುಪಡಿಸುವಂತೆ ಕೋರಿ ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಂಡಿರುವ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ತಮ್ಮ ವಿರುದ್ಧ ವಿಶೇಷ ಮಂಡಳಿ ನಡೆಸುತ್ತಿರುವ ವಿಚಾರಣೆಗೆ ತಡೆ ನೀಡಬೇಕು ಎಂದು ಕೋರಿ ಎಸ್.ಮೂರ್ತಿ ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ಎನ್. ಎಸ್. ಸಂಜಯ್‌ಗೌಡ ಅವರಿದ್ದ ಪೀಠ ಪ್ರಕಟಿಸಿದ್ದು, ಅರ್ಜಿ ವಜಾಗೊಳಿಸಿ ಆದೇಶಿಸಿದೆ. ಇದೇ ವೇಳೆ, ಅರ್ಜಿದಾರರ ವಿರುದ್ಧದ ವಿಚಾರಣೆಯನ್ನು 6 ತಿಂಗಳಲ್ಲಿ ಪೂರ್ಣಗೊಳಿಸುವಂತೆ ವಿಶೇಷ ಮಂಡಳಿಗೆ ತಿಳಿಸಿದೆ.

ಅರ್ಜಿದಾರರು, ತಮ್ಮ ವಿರುದ್ಧ ವಿಧಾನಸಭಾಧ್ಯಕ್ಷರು ಸಲ್ಲಿಸಿರುವ ದೋಷಾರೋಪ ಪಟ್ಟಿಗೆ ವಿಶೇಷ ಮಂಡಳಿಯ ಅನುಮತಿ ಪಡೆದಿಲ್ಲ. ಆದ್ದರಿಂದ, ವಿಚಾರಣೆಗೆ ತಡೆ ನೀಡಬೇಕು ಎಂದು ಕೋರಿದ್ದಾರೆ. ಆದರೆ, ಅರ್ಜಿದಾರರನ್ನು ಅಮಾನತು ಮಾಡುವಾಗಲೇ ಅವರ ವಿರುದ್ಧದ ಆರೋಪಗಳನ್ನು ವಿಶೇಷ ಮಂಡಳಿ ಪರಿಶೀಲಿಸಿ ಕ್ರಮ ಕೈಗೊಂಡಿದೆ. ಹೀಗಿರುವಾಗ, ದೋಷಾರೋಪ ಪಟ್ಟಿಗೆ ಮತ್ತೊಮ್ಮೆ ವಿಶೇಷ ಮಂಡಳಿಯ ಅನುಮತಿ ಪಡೆಯುವ ಅಗತ್ಯವಿಲ್ಲ ಎಂದು ಹೈಕೋರ್ಟ್ ತನ್ನ ಆದೇಶದಲ್ಲಿ ಅಭಿಪ್ರಾಯಪಟ್ಟಿದೆ.

**ಪ್ರಕರಣವೇನು?** 2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಪಟ್ಟಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಆ ಹಿನ್ನೆಲೆಯಲ್ಲಿ ವಿಧಾನಸಭೆಯ ಸ್ಪೀಕರ್ ಅವರ ಟಿಪ್ಪಣಿ ಹಾಗೂ ವಿಶೇಷ ಮಂಡಳಿಯ ಆದೇಶಾನುಸಾರ ಎಸ್. ಮೂರ್ತಿ ಅವರನ್ನು ಅಮಾನತುಗೊಳಿಸಿ 2018ರ ಡಿ.27ರಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದರು.